ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯದಂಡಾಧಿಕಾರಿಯವರ ನ್ಯಾಯಾಲಯ, ಪೊನ್ನಂಪೇಟೆ.

# ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 45/2019 .

ಪ್ರಾ.ಸಾ. : 7
ಚಾ.ಸಾ. : 2

| | | |
|---|---|---|
| ಹೆಸರು | : | ಕೆ. ಎಂ. ಮುತ್ತಣ್ಣ |
| ತಂದೆಯ ಹೆಸರು | : | ಕೆ. ಪಿ. ಮುದ್ದಪ್ಪ |
| ವಯಸ್ಸು | : | 50 ವರ್ಷ |
| ಉದ್ಯೋಗ | : | ವ್ಯವಸಾಯ |
| ವಿಳಾಸ | : | ಬಿರುನಾಣಿ |

... ........................................................................................................ ...

ದಿನಾಂಕ 16 ನೇ ಏಪ್ರಿಲ್ 2024 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ:- ಮಾನ್ಯ ಸ ಸ ಅ ರವರಿಂದ :-

ಚಾಸಾ 1 ಪರಿಚಯ. ಆರೋಪಿತರನ್ನು ನೋಡಿದ್ದೇನೆ, ಪರಿಚಯವಿಲ್ಲ. 2-3 ವರ್ಷದ ಹಿಂದೆ 2018 ರಲ್ಲಿ ಬಿರುನಾಣಿಯ ರಸ್ತೆಯಲ್ಲಿ ನಾನು ನಡೆದುಕೊಂಡು ಹೋಗುತ್ತಿದ್ದೆ. ಸಂಜೆ 5.30 ರಿಂದ 6 ಗಂಟೆ ಸಮಯದಲ್ಲಿ ಗಲಾಟೆ ಆಗಿತ್ತು. ಗಲಾಟೆ ಯಾರ ನಡುವೆ ಆಯಿತು ಎಂದು ನನಗೆ ಗೊತ್ತಿಲ್ಲ. ಆ ನಂತರ ನಾನು ಅಲ್ಲಿಂದ ಹೊರಟೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ ಹಾಗೂ ಸ.ಸ.ಅ.ರವರ ವಾದವನ್ನು ಆಲಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

ಪಾಟೀ ಸವಾಲು: - ಮಾನ್ಯ ಸ ಸ ಅ ರವರಿಂದ : -

ದಿ. 04.02.2018 ರಂದು ಸಂಜೆ 6.20 ರ ಸಮಯದಲ್ಲಿ ನಾನು ಮತ್ತು ಚಾಸಾ 3 ರವರು ನಡೆದುಕೊಂಡು ಹೋಗುತ್ತಿದ್ದೆವು ಎಂದರೆ ಸರಿಯಲ್ಲ. ಚಾಸಾ 1 ಆಗ ಅವರ ಕಣದ ಬಳಿ ಇದ್ದರು ಎಂದರೆ ಸರಿ. ಆರೋಪಿತರು ಸಹ ಅಲ್ಲಿ ಹಾಜರಿದ್ದರು ಎಂದರೆ ಸರಿ. ಆರೋಪಿ 1 ದೊಣ್ಣೆಯನ್ನು ಹಿಡಿದಿದ್ದರು ಎಂದರೆ ನನಗೆ ಗೊತ್ತಿಲ್ಲ. ಆರೋಪಿ 1 ರವರು

ಚಾಸಾ 1 ರವರ ಕುರಿತು ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ನನಗೆ ಗೊತ್ತಿಲ್ಲ. ದೊಣ್ಣೆಯಿಂದ ಹಲ್ಲೆ ಮಾಡಿದರು ಎಂದರೆ ನನಗೆ ಗೊತ್ತಿಲ್ಲ. ಬಲಗೈ ಹಿಡಿದು ಹಲ್ಲೆ ಮಾಡಿದರು ಎಂದರೆ ನನಗೆ ಗೊತ್ತಿಲ್ಲ. ಆರೋಪಿ 2 ದೊಣ್ಣೆಯಿಂದ ಚಾಸಾ 1 ರವರ ಹೊಟ್ಟೆ ಮತ್ತು ಕಾಲಿಗೆ ಹೊಡೆದರು ಎಂದರೆ ನನಗೆ ಗೊತ್ತಿಲ್ಲ. ಕೊಲೆ ಬೆದರಿಕೆ ಹಾಕಿದರು ಎಂದರೆ ನನಗೆ ಗೊತ್ತಿಲ್ಲ. ಆಗ ಆರೋಪಿ 1 ಚಾಸಾ 1 ರವರನ್ನು ನೆಲಕ್ಕೆ ಬೀಳಿಸಿ ಕೊಲೆ ಬೆದರಿಕೆ ಹಾಕಿದರು ಎಂದರೆ ನನಗೆ ಗೊತ್ತಿಲ್ಲ. ಬೆಂಗಳೂರಿನಿಂದ ರೌಡಿಗಳನ್ನು ಕರೆಸಿ ಚಾಸಾ 1 ಮತ್ತು ಅವರ ಕುಟುಂಬಸ್ಥರವರಿಗೆ ಕೊಲೆ ಬೆದರಿಕೆ ಹಾಕಿದರು ಎಂದರೆ ನನಗೆ ಗೊತ್ತಿಲ್ಲ. ನಾನು ಮತ್ತು ಚಾಸಾ 3 ಸಮಾದಾನ ಪಡಿಸಿದೆವು ಎಂದರೆ ಸರಿ. ಆಗ ಆರೋಪಿ 2 ದೊಣ್ಣೆಯನ್ನು ಅಲ್ಲೇ ಬಿಸಾಡಿ ಹೋದರು ಎಂದರೆ ನನಗೆ ಗೊತ್ತಿಲ್ಲ. ಆರೋಪಿತರು ನಮ್ಮ ಊರಿನವರು, 2 – 3 ವರ್ಷದಿಂದ ನೋಡಿದ್ದೇನೆ. ಈಗ ಎಲ್ಲ ವಿಚಾರ ಗೊತ್ತಿದ್ದರೂ, ಮೇಲೆ ಹೇಳಿದಂತೆ ಹೇಳಿಕೆ ನೀಡಿದ್ದರೊ, ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿರಾಕರಿಸಿದ ಹೇಳಿಕೆಯನ್ನು ನಿ ಪಿ 7 ಎಂದು ಗುರುತಿಸಲಾಯಿತು.

**ಪಾಟೀ ಸವಾಲು :- ಆರೋಪಿ 1 ರವರಿಂದ :-**

ಆರೋಪಿ 1 ರವರಿಂದ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಪಾಟೀ ಸವಾಲು :- ಆರೋಪಿ 2 ರವರ ಪರ ವಕೀಲರಿಂದ :-**

ಆರೋಪಿ 2 ರವರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ :- - ಇಲ್ಲ -**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಖ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲಾಗಿರುತ್ತದೆ)
ಓದಿ ಹೇಳಿ ಕೇಳಿಸಿ ಸರಿ ಇದೆ ಎಂದು ಒಪ್ಪಿದೆ.

Sd/xxx-
ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ.,ಪೊನ್ನಂಪೇಟೆ.

(ಸಾಕ್ಷಿಯವರ ಸಹಿ)